# All India Radio : Bangalore
# Pradesh Samachar In Kannada
# 24.09.2017/ 1840 hrs

ಪ್ರದೇಶ ಸಮಾಚಾರ

## ಆಕಾಶವಾಣಿ : ಬೆಂಗಳೂರು

ಮುಖ್ಯಾಂಶಗಳು:

- ಸ್ವಚ್ಛತಾ ಕಾರ್ಯ, ಸಾಮೂಹಿಕ ಆಂದೋಲನವಾಗಿದ್ದು, ಸರ್ವರೂ ಈ ಅಭಿಯಾನದ ಭಾಗವಾಗಿದ್ದಾರೆ – ಪ್ರಧಾನಮಂತ್ರಿ ಪ್ರಶಂಸೆ.
- ಲಿಂಗಾಯತ ಪ್ರತ್ಯೇಕ ಧರ್ಮದ ಪರ–ವಿರೋಧ ಹೋರಾಟಕ್ಕೂ – ಸರ್ಕಾರಕ್ಕೂ ಸಂಬಂಧವಿಲ್ಲ – ಮುಖ್ಯಮಂತ್ರಿ ; ಲಿಂಗಾಯತ ಪ್ರತ್ಯೇಕ ಧರ್ಮ ಸ್ಥಾನಮಾನಕ್ಕೆ ಒತ್ತಾಯಿಸಿ, ಕಲಬುರಗಿಯಲ್ಲಿ ರ್‍ಯಾಲಿ.
- ರಾಜ್ಯದಲ್ಲಿ ಸದ್ಯದ ಮಳೆಯಿಂದಾಗಿ ಹಿಂಗಾರು ಬೆಳೆಗೆ ಉತ್ತಮ ವಾತಾವರಣ– ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದ ನಿರ್ದೇಶಕರು.
- ರಾಜ್ಯದ ವಿವಿಧೆಡೆ ಇಂದು ನವರಾತ್ರಿಯ 4ನೇ ದಿನದ ಪೂಜಾ ವಿಧಿಗಳ ಸಂಭ್ರಮ.

*********

ಸ್ವಚ್ಛತಾ ಕಾರ್ಯ ಇಂದು ಸಾಮೂಹಿಕ ಆಂದೋಲನವಾಗಿದೆ, ಮಕ್ಕಳು, ಹಿರಿಯರೂ ಸೇರಿದಂತೆ ಸಮಾಜದ ಎಲ್ಲ ವರ್ಗಗಳ ನಗರ, ಗ್ರಾಮೀಣ ಜನರು ಸ್ವಚ್ಛತಾ ಅಭಿಯಾನದ ಭಾಗವಾಗಿದ್ದಾರೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರಶಂಸೆ ವ್ಯಕ್ತ ಪಡಿಸಿದ್ದಾರೆ.

ಆಕಾಶವಾಣಿಯಲ್ಲಿಂದು ಮನ್ ಕಿ ಬಾತ್ ಕಾರ್ಯಕ್ರಮದ 36ನೇ ಸಂಚಿಕೆಯಲ್ಲಿ ರಾಷ್ಟ್ರದ ಜನತೆಯನ್ನು ಉದ್ದೇಶಿಸಿ ತಮ್ಮ ಅಭಿಪ್ರಾಯ ಹಂಚಿಕೊಂಡ ಅವರು, ಸ್ವಚ್ಛತಾ ಆಂದೋಲನದ ಮೂಲಕ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛವಾಗಿ ಇರಿಸಿಕೊಳ್ಳಲು ಹಾಗೂ ಮಲಿನಗೊಳಿಸದಂತೆ ಜನರನ್ನು ತಡೆಯಲು ಸಾಧ್ಯವಾಗಿದೆ ಎಂದು ಹೇಳಿದರು.

ಕಳೆದ 4 ದಿನಗಳ ಸ್ವಚ್ಚತಾ ಹಿ–ಸೇವಾ ಕಾರ್ಯಕ್ರಮಗಳಲ್ಲಿ ದೇಶಾದ್ಯಂತ 75 ಲಕ್ಷಕ್ಕೂ ಹೆಚ್ಚು ಜನರು ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಂಡು 40 ಸಾವಿರಕ್ಕೂ ಹೆಚ್ಚು ಕಡೆ ಸ್ವಚ್ಛತಾ ಕಾರ್ಯ ನಡೆಸಿದ್ದಾರೆ ಎಂದು ಪ್ರಧಾನಿ ಶ್ಲಾಘಿಸಿದರು.

ಅಕ್ಟೋಬರ್ 2 ಅನ್ನು ಸ್ಮರಣೀಯವಾಗಿಸಲು ಭಾರತದ ಮಹಾನ್ ವ್ಯಕ್ತಿಗಳಾದ ಮಹಾತ್ಮಗಾಂಧಿ ಹಾಗೂ ಸರ್ದಾರ್ ಪಟೇಲ್ ದೇಶಕ್ಕೆ ನೀಡಿದ ಹೊಸ ದಿಕ್ಕನ್ನು ಸ್ಮರಿಸಬೇಕು ಎಂದು ಅವರು ಹೇಳಿದರು.

ಲಾಲ್‌ಬಹುದ್ದೂರ್ ಶಾಸ್ತ್ರಿ, ಜಯಪ್ರಕಾಶ್ ನಾರಾಯಣ್, ದಿನ್‌ದಯಾಳ್ ಉಪಾದ್ಯಾಯ ಹಾಗೂ ನಾನಾಜೀ ದೇಶ್‌ಮುಕ್ ಅವರನ್ನು ಪ್ರಧಾನಿ ಸ್ಮರಿಸಿದರು.

ಜನರು ಕೇವಲ ಭೇಟಿ ಉದ್ದೇಶಕ್ಕಾಗಿ ಪ್ರವಾಸ ಮಾಡದೇ, ಕಲಿಕೆಯ ಉದ್ದೇಶದಿಂದ ಪ್ರವಾಸ ಕೈಗೊಂಡರೆ, ಪ್ರವಾಸೋದ್ಯಮಕ್ಕೆ ಮತ್ತಷ್ಟು ಉತ್ತೇಜನ ದೊರೆಯಲಿದೆ ಎಂದು ಪ್ರಧಾನಮಂತ್ರಿ ಹೇಳಿದರು.

ಮನ್ ಕಿ ಬಾತ್ ಕಾರ್ಯಕ್ರಮ 3 ವರ್ಷ ಪೂರೈಸಿದ ಬಗ್ಗೆ ಪ್ರಸ್ತಾಪಿಸಿದ ಅವರು, ಕಳೆದ 3 ವರ್ಷಗಳಲ್ಲಿ ರಾಜಕೀಯ ಹೊರತುಪಡಿಸಿ ಇತರೆ ಎಲ್ಲಾ ವಿಚಾರ ಹಂಚಿಕೊಳ್ಳಲು ಪ್ರಯತ್ನಿಸಿರುವುದಾಗಿ ತಿಳಿಸಿದರು.

'ಸೆಲ್ಫಿ ವಿತ್ ಡಾಟರ್' ಕಾರ್ಯಕ್ರಮ ಭಾರತವಲ್ಲದೇ ವಿಶ್ವದಾದ್ಯಂತ ಮಹಾನ್ ಅಭಿಯಾನವಾಗಿ ರೂಪಗೊಂಡಿದೆ ಎಂದು ಪ್ರಧಾನಿ ಸಂತಸ ವ್ಯಕ್ತಪಡಿಸಿದರು.

ನವರಾತ್ರಿ ಅಂಗವಾಗಿ ದೇಶದ ಜನತೆಗೆ ಶುಭ ಕೋರಿದ ಪ್ರಧಾನಮಂತ್ರಿ ನರೇಂದ್ರ ಮೋದಿ, ಮಾತೃ ಶಕ್ತಿಯಿಂದಾಗಿ ಭಾರತ ಹಾಗೂ ಭಾರತದ ಜನತೆ ಇನ್ನಷ್ಟು ಉತ್ತುಂಗಕ್ಕೆ ಏರುವಂತಾಗಲಿ ಎಂದು ಹಾರೈಸಿದರು.

*********

ಲಿಂಗಾಯತ ಪ್ರತ್ಯೇಕ ಧರ್ಮ ವಿಚಾರದಲ್ಲಿ ನಡೆಯುತ್ತಿರುವ ಪರ, ವಿರೋಧ ಹೋರಾಟಕ್ಕೂ, ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಚಿತ್ರದುರ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲಿಂಗಾಯತ ಪ್ರತ್ಯೇಕ ಧರ್ಮ ವಿಷಯದಲ್ಲಿ ವೈಯಕ್ತಿಕ ಅಭಿಪ್ರಾಯ ವ್ಯಕ್ತಪಡಿಸಲು ಸಚಿವರುಗಳಿಗೆ ಸ್ವಾತಂತ್ರ್ಯವಿದೆ, ಸಚಿವರ ಹೇಳಿಕೆಗಳು ಸರ್ಕಾರದ ನಿಲುವು ಆಗುವುದಿಲ್ಲ ಎಂದು ಹೇಳಿದರು.

ಮಹದಾಯಿ ನದಿ ನೀರು ಹಂಚಿಕೆ ವಿಚಾರ ಕುರಿತು ಗೋವಾ ಮುಖ್ಯಮಂತ್ರಿಗಳ ಜೊತೆ ರಾಜ್ಯ ಬಿಜೆಪಿ ನಾಯಕರು ನಾಳೆ ಯಾವ ಅಂಶಗಳ ಕುರಿತು ಮಾತುಕತೆ ನಡೆಸಲಿದ್ದಾರೆ ಎಂಬ ಮಾಹಿತಿ ಇಲ್ಲ, ವಿವಾದ ಪರಿಹಾರಕ್ಕೆ ಗೋವಾ ಮುಖ್ಯಮಂತ್ರಿಗಳು ಮುಂದಾಗುವಂತೆ ಮನವೊಲಿಸಲಿ ಎಂದು ಸಿದ್ದರಾಮಯ್ಯ ತಿಳಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್. ಯಡಿಯೂರಪ್ಪ ವಿರುದ್ಧ ಸರ್ಕಾರ ಡಿನೋಟಿಫಿಕೇಷನ್ ಕೇಸು ದಾಖಲು ಮಾಡಿಲ್ಲ, ಖಾಸಗಿ ವ್ಯಕ್ತಿಯೊಬ್ಬರ ದೂರು ಆಧರಿಸಿ ಭ್ರಷ್ಟಾಚಾರ ನಿಗ್ರಹ ದಳ ಎಫ್‌ಐಆರ್ ದಾಖಲಿಸಿದೆ, ಹೈಕೋರ್ಟ್ ತಡೆಯಾಜ್ಞೆ ನೀಡಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

*********

ಲಿಂಗಾಯತ ಪ್ರತ್ಯೇಕ ಧರ್ಮ ಸ್ಥಾನಮಾನಕ್ಕೆ ಒತ್ತಾಯಿಸಿ ಕಲಬುರಗಿಯಲ್ಲಿಂದು ಸಮುದಾಯದ ರ್‍ಯಾಲಿ ನಡೆಯಿತು.

ಮಹಾರಾಷ್ಟ್ರ, ಆಂಧ್ರಪ್ರದೇಶ, ತೆಲಂಗಾಣದಿಂದ ಅಲ್ಲದೆ ರಾಜ್ಯದ ವಿವಿಧೆಡೆಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಆಗಮಿಸಿದ್ದ ಲಿಂಗಾಯತ ಸಮುದಾಯದವರು ರ‍್ಯಾಲಿಯಲ್ಲಿ ಪಾಲ್ಗೊಂಡರು.

ಸಚಿವರಾದ ಎಂ.ಬಿ.ಪಾಟೀಲ್, ಡಾ ಶರಣಪ್ರಕಾಶ್ ಪಾಟೀಲ್, ಬಸವರಾಜ ರಾಯರೆಡ್ಡಿ, ವಿನಯ್ ಕುಲಕರ್ಣಿ, ಜೆಡಿಎಸ್ ನಾಯಕ ಬಸವರಾಜ ಹೊರಟ್ಟಿ ಮತ್ತಿತರರು ರ‍್ಯಾಲಿ ಉದ್ದೇಶಿಸಿ ಮಾತನಾಡಿದರು.

*********

ಪ್ರತಿ ಪಕ್ಷ ಬಿಜೆಪಿ ನಾಯಕರನ್ನು ಟೀಕಿಸುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಪದ ಬಳಕೆ ಬಗ್ಗೆ ಎಚ್ಚರ ವಹಿಸಬೇಕು ಎಂದು ಪಕ್ಷದ ವಕ್ತಾರ ಎಸ್. ಸುರೇಶ್ ಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮಾಧ್ಯಮಗಳಿಗೆ ನೀಡಿರುವ ಪ್ರಕಟಣೆಯಲ್ಲಿ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್. ಯಡಿಯೂರಪ್ಪ ಅವರು ಕಳೆದ 4 ದಶಕಗಳಿಂದ ಜನಪರ ಹೋರಾಟ ಮಾಡುತ್ತಿದ್ದಾರೆ, ಒಬ್ಬ ನಾಯಕರ ಕುರಿತು ಟೀಕೆ ವ್ಯಕ್ತಪಡಿಸುವಾಗ ಪದ ಬಳಕೆ ಕುರಿತು ಎಚ್ಚರ ವಹಿಸುವುದು ಮುಖ್ಯಮಂತ್ರಿ ಅವರಿಗೆ ಗೌರವ ತರುತ್ತದೆ ಎಂಬುದನ್ನು ಅರಿಯಬೇಕು ಎಂದು ಹೇಳಿದರು.

*********

ರಾಜ್ಯದಲ್ಲಿ ಮುಂಗಾರು ಆರಂಭ ವಿಳಂಬವಾಗಿ ನಿರೀಕ್ಷಿತ ಮಟ್ಟದಲ್ಲಿ ಮಳೆ ಬಿದ್ದಿಲ್ಲವಾದರೂ, ಇತ್ತೀಚಿನ ದಿನಗಳಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಹಿಂಗಾರು  ಬೆಳೆಗೆ ಉತ್ತಮ ವಾತಾವರಣ ನಿರ್ಮಾಣವಾಗಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದ ನಿರ್ದೇಶಕ ಜಿ.ಎಸ್. ಶ್ರೀನಿವಾಸ ರೆಡ್ಡಿ ತಿಳಿಸಿದ್ದಾರೆ.

ಪಿಟಿಐ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಅವರು, ಮುಂಗಾರು ವಿಳಂಬದಿಂದಾಗಿ ಮುಂಗಾರು ಬೆಳೆಯಲ್ಲಿ ನಷ್ಟ ಎದುರಾಗಿದ್ದು, ಈ ನಷ್ಟವನ್ನು ಹಿಂಗಾರು  ಬೆಳೆ ಮೂಲಕ ತುಂಬಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಹಿಂಗಾರು  ಬೆಳೆ ಅವಧಿಯಲ್ಲಿ 37 ಲಕ್ಷ ಹೆಕ್ಟರ್‌ನಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ ಎಂದು ಅವರು ತಿಳಿಸಿದರು.

ಮುಂಗಾರು ಮಾರುತಗಳು ಹಿಂದೆ ಸರಿಯುವ ಅವಧಿ ಸಮೀಪಿಸುತ್ತಿದ್ದು, ಈ ಹಂತದಲ್ಲಿ ರಾಜ್ಯಾದ್ಯಂತ ಸುರಿಯುತ್ತಿರುವ ಮಳೆಯಿಂದಾಗಿ ಹಲವು ಜಲಾಶಯಗಳಲ್ಲಿನ ನೀರಿನ ಮಟ್ಟ ಏರಿಕೆಯಾಗುತ್ತಿದ್ದು, ಮುಂದಿನ ದಿನಗಳಲ್ಲಿ ಉತ್ತಮ ಪರಿಸ್ಥಿತಿ ನಿರ್ಮಾಣವಾಗುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ಶ್ರೀನಿವಾಸ ರೆಡ್ಡಿ ಹೇಳಿದರು.

*********

ದಸರಾ ಆಚರಣೆ ಅಂಗವಾಗಿ ರಾಜ್ಯದ ವಿವಿಧೆಡೆ ಇಂದು ನವರಾತ್ರಿಯ ನಾಲ್ಕನೇ ದಿನದ ಪೂಜಾ ವಿಧಿಗಳು ನೆರವೇರುತ್ತಿವೆ.

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಅರಮನೆ ಆವರಣದಲ್ಲಿ ಯೋಗೋತ್ಸವಕ್ಕೆ ಮಹಾನಗರ ಪಾಲಿಕೆ ಆಯುಕ್ತ ಜಗದೀಶ್ ಚಾಲನೆ ನೀಡಿದರು.

ನಾಡಹಬ್ಬ ದಸರಾ ಅಂಗವಾಗಿ ಆಯೋಜಿಸಲಾಗಿರುವ "ಮೇಡ್ ಇನ್ ಮೈಸೂರ್" ಜಾವಾ ಮೋಟಾರ್ ಬೈಕ್‌ಗಳಲ್ಲಿ ಪಾರಂಪರಿಕ ಕಟ್ಟಡಗಳಿಗೆ ಭೇಟಿ ನೀಡುವ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ 40ಕ್ಕೂ ಹೆಚ್ಚು ಮಂದಿ ಬೈಕ್ ಸವಾರರು ಪಾಲ್ಗೊಂಡಿದ್ದರು.

ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಐಷಾರಾಮಿ ಪ್ರವಾಸ ಸುವರ್ಣ ರಥ ಯೋಜನೆಯಡಿ 20 ಪ್ರವಾಸಿಗರು ಬೆಂಗಳೂರಿನಿಂದ ಮೈಸೂರಿಗೆ ಆಗಮಿಸಿದರು.

ದಸರಾ ಕ್ರೀಡಾ ಸಮಿತಿ ಆಯೋಜಿಸಿದ್ದ, ಹಾಫ್ ಮ್ಯಾರಥಾನ್‌ನಲ್ಲಿ ತಮಿಳುನಾಡಿನ ಊಟಿಯ ಗೋವಿಂದ ಸಿಂಗ್ ಹಾಗೂ ದಾವಣಗೆರೆಯ ಎ ಅಕ್ಷತಾ ಕ್ರಮವಾಗಿ ಪುರುಷ ಹಾಗೂ ಮಹಿಳೆಯರ ವಿಭಾಗದಲ್ಲಿ ಪ್ರಥಮ ಸ್ಥಾನ ಗಳಿಸಿದರು.

ಪುರುಷರ 10 ಕಿಲೋಮೀಟರ್ ಓಟದಲ್ಲಿ ಬದಾಮಿಯ ಮಹಾಕುಂಟೇಶ್ವರ ಪ್ರಥಮ, ಮೈಸೂರಿನ ಚೇತನ ದ್ವಿತಿಯ ಹಾಗೂ ಬೆಳಗಾವಿಯ ಮಲ್ಲೇಶ್ ಪಾಟೀಲ್ ತೃತೀಯ ಸ್ಥಾನ ಪಡೆದರು. ಮೂರು ಕಿಲೋಮೀಟರ್ ಓಟದಲ್ಲಿ ಎಸ್ ಆರ್ ರಾಹುಲ್, ಎಚ್.ಎಸ್. ಹೇಮಂತ್ ಮತ್ತು ವಿಶಾಲ್ ಕ್ರಮವಾಗಿ ಮೊದಲ ಮೂರು ಸ್ಥಾನ ಗಳಿಸಿದರು.

ಮಹಿಳೆಯರ ಆರು ಕಿಲೋಮೀಟರ್ ಓಟದಲ್ಲಿ ಬೆಂಗಳೂರಿನ ಸ್ವಪ್ನಾ ಪಾಟೀಲ್, ಮಂಗಳೂರಿನ ಚೈತ್ರ ದೇವಾಂಗ ಹಾಗೂ ಮೈಸೂರಿನ ತಿಪ್ಪವ್ವ ಸಣ್ಣಕ್ಕಿ ಕ್ರಮವಾಗಿ ಮೊದಲ ಮೂರು ಸ್ಥಾನ ಪಡೆದರು.

ಮೂರು ಕಿಲೋಮೀಟರ್ ಓಟದಲ್ಲಿ ಆಳ್ವಾಸ್‌ನ ಮಾಲಾಶ್ರೀ, ಕೊಡಗಿನ ರಾಶಿ ಹಾಗೂ ಟಿ.ನರಸಿಪುರದ ಚೈತ್ರ ಕ್ರಮವಾಗಿ ಮೊದಲ ಮೂರು ಸ್ಥಾನ ಪಡೆದರು.

ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣದಲ್ಲಿ ಇಂದಿನಿಂದ ಮೂರು ದಿನಗಳ ನಾಡಹಬ್ಬ ದಸರಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

*********

ಬೆಂಗಳೂರು ಗ್ರಾಮಾಂತರ ದೊಡ್ಡಬಳ್ಳಾಪುರದಲ್ಲಿಂದು ಸಾರಿಗೆ ಇಲಾಖೆ ಅಧಿಕಾರಿಗಳೊಂದಿಗೆ ಜನಸಂಪರ್ಕ ಸಭೆ ನಡೆಯಿತು.

ಶಾಸಕ ಟಿ.ವೆಂಕಟರಮಣಯ್ಯ ಮಾತನಾಡಿ, ವಿದ್ಯಾರ್ಥಿಗಳು ಹಾಗೂ ಉದ್ಯೋಗಿಗಳಿಗೆ ಅನುಕೂಲವಾಗುವಂತೆ ಹಾಗೂ ಗ್ರಾಮಾಂತರ ಪ್ರದೇಶಗಳಿಗೆ ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸುವಂತೆ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಾರಿಗೆ ಅಧಿಕಾರಿಗಳು ಹಾಗೂ ಶಾಸಕರ ಗಮನಕ್ಕೆ ತಂದರು. ಸಮಸ್ಯೆ ಪರಿಹರಿಸುವುದಾಗಿ ಸಾರಿಗೆ ಸಂಸ್ಥೆ ವಿಸ್ತರಣಾಧಿಕಾರಿಗಳು ಭರವಸೆ ನೀಡಿದರು.

*********

1. ಕೋಲಾರದಲ್ಲಿಂದು ನಡೆದ ಅಂತಾರಾಷ್ಟ್ರೀಯ ವಿಜ್ಞಾನಿ, ಪ್ರೊಫೆಸರ್ ಕಾಟೇಪಲ್ಲಿ ರಾಜು ಶ್ರೀನಿವಾಸನ್ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ಆರ್.ರಮೇಶ್‌ಕುಮಾರ್, ಸಮರ್ಪಣಾ ಮನೋಭಾವದಿಂದ ಸಂಶೋಧನೆಗಳ ಮೂಲಕ ಸಮಾಜಕ್ಕೆ ಅಪ್ರತಿಮ ಸೇವೆ ಸಲ್ಲಿಸುತ್ತಿರುವ ರಾಜು ಶ್ರೀನಿವಾಸನ್ ಸಾಧನೆ ದೇಶವೇ ಹೆಮ್ಮೆ ಪಡುವಂತಹುದು ಎಂದು ಅಭಿಪ್ರಾಯಪಟ್ಟರು.
2. ಬೆಂಗಳೂರು ಸೇರಿದಂತೆ ದೇಶದ ಪ್ರಮುಖ ನಗರಗಳಲ್ಲಿ ಕೌಶಲ್ಯ ಕುರಿತ 'ಹುನರ್ ಹಾಥ್' ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಖಾತೆ ಸಚಿವ ಮುಖ್ತಾರ್ ಅಬ್ಬಾಸ್ ನಖ್ವಿ ಪುದುಚೇರಿಯಲ್ಲಿಂದು ತಿಳಿಸಿದ್ದಾರೆ.
3. ಚಿತ್ರದುರ್ಗದ ಮುರುಘಾ ಮಠದಲ್ಲಿ ನಡೆಯುತ್ತಿರುವ ಶರಣ ಸಂಸ್ಕೃತಿ ಉತ್ಸವದ 2ನೇ ದಿನವಾದ ಇಂದು "ಸಮೂಹ ಮಾಧ್ಯಮಗಳು ಮತ್ತು ಸದನದ ಹಕ್ಕುಚ್ಯುತಿ" ವಿಷಯ ಕುರಿತ ಗೋಷ್ಠಿ ಜರುಗಿತು. ಶ್ರೀಮಠದ ಡಾ.ಶಿವಮೂರ್ತಿ ಮುರುಘಾ ಶರಣರು, ವಿಧಾನ ಪರಿಷತ್‌ನ ಮಾಜಿ ಸಭಾಪತಿ ವಿ.ಆರ್.ಸುದರ್ಶನ್, ಶಾಸಕ ವೈಎಸ್.ವಿ.ದತ್ತ ಮಾತನಾಡಿದರು.
4. ವಿಜಯಪುರದ ಮಹಿಳಾ ವಿಶ್ವವಿದ್ಯಾಲಯದಲ್ಲಿಂದು ನಡೆದ ಪ್ರಚಾರೋಪನ್ಯಾಸ ಮಾಲಿಕೆಯಲ್ಲಿ ಮಾತನಾಡಿದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಸಬಿಹಾ, ಅಧಿಕಾರ ನಿರಾಕರಣೆ, ಸತಿ–ಪತಿಗಳ ಸ್ನೇಹ, ಸಂವಹನ ಮತ್ತು ವೈಚಾರಿಕ ಸ್ವಾತಂತ್ರ್ಯ ವಚನಕಾರ್ತಿಯರ ಕೌಟುಂಬಿಕ ನೆಲೆಯ ಚಿಂತನೆಗಳಾಗಿವೆ ಎಂದು ಅಭಿಪ್ರಾಯಪಟ್ಟರು.
5. ಬೆಳಗಾವಿಯಲ್ಲಿಂದು ರೇಣುಕಾಶ್ರೀ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಯೋಗ ಗುರು ಬಾಬಾ ರಾಮದೇವ್, ವೀರಶೈವ ಹಾಗೂ ಲಿಂಗಾಯತ ಸಮುದಾಯ ಭಾರತ ಮಾತೆಯ ಮಕ್ಕಳಾಗಿದ್ದು, ಹಿಂದುತ್ವದಿಂದ ಹೊರ ಹೋಗುವ ಅಗತ್ಯವಿಲ್ಲ ಎಂದು ಅಭಿಪ್ರಾಯಪಟ್ಟರು.

*********

ರಾಜ್ಯದಲ್ಲಿ ನೈರುತ್ಯ ಮುಂಗಾರು ಕ್ಷೀಣಿಸಿದೆ. ಉತ್ತರ ಒಳನಾಡಿನ ಕೆಲವೆಡೆ, ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಚದುರಿದಂತೆ ಮಳೆಯಾಗಿದೆ.

ಖಜೂರಿಯಲ್ಲಿ 5 ಸೆಂಟಿಮೀಟರ್ ಮಳೆ ಬಿದ್ದಿದೆ, ಉಳಿದಂತೆ ಜಮಖಂಡಿ 3, ಬೈಲಹೊಂಗಲ, ಗದಗ, ಇಳಕಲ್, ಬಸವನ ಬಾಗೇವಾಡಿ, ಇಂಡಿಯಲ್ಲಿ ತಲಾ ಒಂದು ಸೆಂಟಿಮೀಟರ್ ಮಳೆಯಾಗಿದೆ.

ಮುನ್ಸೂಚನೆಯಂತೆ ದಕ್ಷಿಣ ಒಳನಾಡಿನ ಹಲವೆಡೆ, ಕರಾವಳಿ ಹಾಗೂ ಉತ್ತರ ಒಳನಾಡಿನ ಅಲ್ಲಲ್ಲಿ ಮಳೆ ಬೀಳುವ ಸಾಧ್ಯತೆ.

ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ಇರಲಿದ್ದು, ಒಂದೆರಡು ಬಾರಿ ಮಳೆ ನಿರೀಕ್ಷಿತ.

*********

**ಮುಕ್ತಾಯ**

*********